# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಸಿಐ 286 ಎಸ್‌ಪಿಕ್ಯೂ 2008, ದಿನಾಂಕ: 16.11.2009.
2) ಸರ್ಕಾರದ ಆದೇಶ ಸಂಖ್ಯೆ: ಸಿಐ 03 ಎಸ್‌ಪಿಕ್ಯೂ 2014, ದಿನಾಂಕ: 23.10.2018.
3) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 01 ಐಎಪಿ(ಇ) 2019, ದಿನಾಂಕ: 30.04.2019.
4) ಸಿ.ಇ.ಓ. & ಇ.ಎಂ., ಕೆ.ಐ.ಎ.ಡಿ.ಬಿ. ಇವರ ಪತ್ರ ಸಂಖ್ಯೆ: ಕ.ಕೈ.ಪ್ರ.ಅ.ಮಂ/ ಕೇಂ.ಕ/ ಆಡಳಿತ-1326/ 15923/ 2019-20, ದಿನಾಂಕ: 10.02.2020 ಮತ್ತು 05.08.2021.

---*---

ಪ್ರಸ್ತಾವನೆ :-

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ಅನ್ವಯ ಮಂಜೂರಾಗಿರುವ ಗ್ರೂಪ್-ಎ, ಬಿ, ಸಿ ಮತ್ತು ಡಿ ವೃಂದದ ಹುದ್ದೆಗಳ ಪೈಕಿ 149 ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮಂಜೂರಾಗಿದ್ದು, ಈ ಪೈಕಿ 28 ಹುದ್ದೆಗಳು ಭರ್ತಿಯಾಗಿದ್ದು, 121 ಹುದ್ದೆಗಳು ಖಾಲಿಯಿರುತ್ತವೆ. ಈ ಹುದ್ದೆಗಳಲ್ಲಿ ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ 28 ಹುದ್ದೆಗಳು ಒಳಗೊಂಡಿರುತ್ತವೆ.

ಕೆ.ಐ.ಎ.ಡಿ.ಬಿ.ಯಲ್ಲಿ ಹಾಲಿ ಇರುವ ಹುದ್ದೆಗಳಲ್ಲಿ 1 ಯೋಜನಾಧಿಕಾರಿ ಹುದ್ದೆ ಖಾಲಿ ಇದ್ದು, ಸಮಾಜ ಕಲ್ಯಾಣ ಇಲಾಖೆಯ ದಿನಾಂಕ 05.06.2015ರ ವರದಿಯಲ್ಲಿ ಸದರಿ ಹುದ್ದೆಯನ್ನು 1 ಪರಿಶಿಷ್ಟ ಜಾತಿಯ ಬ್ಯಾಕ್‌ಲಾಗ್‌ನಲ್ಲಿ ಭರ್ತಿ ಮಾಡಲು ಶಿಫಾರಸ್ಸು ಮಾಡಿರುವುದರಿಂದ ಈ ಹುದ್ದೆಯನ್ನು ನೇರ ನೇಮಕಾತಿಯಡಿ ಭರ್ತಿ ಮಾಡಬೇಕಾಗಿರುತ್ತದೆ.

ಕೆ.ಐ.ಎ.ಡಿ.ಬಿ.ಯಲ್ಲಿ ಖಾಲಿಯಿದ್ದ ವಿವಿಧ ವೃಂದಗಳ 22 ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನೇರ ನೇಮಕಾತಿ ಮೂಲಕ ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಭರ್ತಿ ಮಾಡಲು ಮೇಲೆ (2)ರಲ್ಲಿ ಓದಲಾದ ಆದೇಶದಲ್ಲಿ ಆದೇಶಿಸಲಾಗಿದ್ದರ ಮೇರೆಗೆ, ಸದರಿ ಹುದ್ದೆಗಳನ್ನು ಭರ್ತಿ ಮಾಡುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಕೋರಲಾಗಿದ್ದು, ಕನಿಷ್ಠ 100 ಹುದ್ದೆಗಳನ್ನು ಭರ್ತಿ ಮಾಡುವಂತೆ ಸರ್ಕಾರದ ವಿವಿಧ ಇಲಾಖೆಗಳಿಂದ ಕೋರಿಕೆ ಬಂದಲ್ಲಿ ಮಾತ್ರ ನೇರ ನೇಮಕಾತಿ ಸಂಬಂಧ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿರುವುದರಿಂದ, ಮಂಡಳಿಯ 22 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆಯನ್ನು ಕೈಗೊಳ್ಳಲು ಸಾಧ್ಯವಿರುವುದಿಲ್ಲವೆಂದು ಕಾರ್ಯನಿರ್ವಾಹಕ

ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರು ದಿನಾಂಕ 07.01.2020ರ ಪತ್ರದಲ್ಲಿ ತಿಳಿಸಿರುತ್ತಾರೆ.

ಕೆ.ಐ.ಎ.ಡಿ.ಬಿ.ಯಲ್ಲಿ ಖಾಯಂ ಅಧಿಕಾರಿ/ ನೌಕರರ ಕೊರತೆ ಇರುವುದರಿಂದ, ಮಂಡಳಿಯ ಉತ್ತಮ ಕಾರ್ಯನಿರ್ವಹಣೆಯ ಹಿತದೃಷ್ಟಿಯಿಂದ, ಪ್ರಸ್ತುತ ಖಾಲಿಯಿರುವ ವಿವಿಧ ವೃಂದದ ಈ ಕೆಳಕಂಡ 71 ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇರ ನೇಮಕಾತಿಯಡಿ ಭರ್ತಿ ಮಾಡಲು ಸರ್ಕಾರದ ಅನುಮೋದನೆ ನೀಡುವಂತೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು ಮೇಲೆ (4)ರಲ್ಲಿ ಓದಲಾದ ಪತ್ರದಲ್ಲಿ ಕೋರಿದ್ದಾರೆ:-

| ಕ್ರ. ಸಂ. | ಹುದ್ದೆಯ ಹೆಸರು | ಅನುಮೋದನೆ ಕೋರಿರುವ ಹುದ್ದೆಗಳ ಸಂಖ್ಯೆ |
|---|---|---|
| 1. | ಯೋಜನಾಧಿಕಾರಿ | 01 |
| 2. | ಸಹಾಯಕ ಅಭಿಯಂತರ (ಸಿವಿಲ್) | 10 |
| 3. | ಸಹಾಯಕ ಅಭಿಯಂತರ (ವಿದ್ಯುತ್) | 01 |
| 4. | ಸಹಾಯಕ | 25 |
| 5. | ಶೀಘ್ರಲಿಪಿಗಾರ | 11 |
| 6. | ಕಿರಿಯ ಸಹಾಯಕ | 15 |
| 7. | ಡಾಟಾ ಎಂಟ್ರಿ ಆಪರೇಟರ್ | 01 |
| 8. | ಎಲೆಕ್ಟ್ರೀಷಿಯನ್ | 07 |
| | ಒಟ್ಟು | 71 |

ಈ ಪ್ರಸ್ತಾವನೆಯನ್ನು ಸಮಗ್ರವಾಗಿ ಪರಿಶೀಲಿಸಿ, ಈ ಕೆಳಗಿನ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಐ 45 ಎಸ್‌ಪಿಕ್ಯೂ(ಇ) 2020,**
**ಬೆಂಗಳೂರು, ದಿನಾಂಕ: 03.03.2022.**

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಖಾಲಿಯಿರುವ ವಿವಿಧ ವೃಂದದ ಈ ಕೆಳಕಂಡ 54 ಹುದ್ದೆಗಳನ್ನು ಮಂಡಳಿಯ ಆಂತರಿಕ ಸಂಪನ್ಮೂಲದಿಂದ ವೆಚ್ಚ ಭರಿಸುವ ಷರತ್ತಿಗೊಳಪಟ್ಟು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿಯಡಿ ಭರ್ತಿ ಮಾಡಲು ಸರ್ಕಾರದ ಮಂಜೂರಾತಿ ನೀಡಿದೆ:-

| ಕ್ರ.ಸಂ. | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ |
|---|---|---|
| 1. | ಯೋಜನಾಧಿಕಾರಿ | 01 |
| 2. | ಸಹಾಯಕ ಅಭಿಯಂತರ (ಸಿವಿಲ್) | 10 |
| 3. | ಸಹಾಯಕ ಅಭಿಯಂತರ (ವಿದ್ಯುತ್) | 01 |

...3)

| | | |
|---|---|---|
| 4. | ಸಹಾಯಕ | 20 |
| 5. | ಎಲೆಕ್ಟ್ರೀಷಿಯನ್ | 07 |
| 6. | ಕಿರಿಯ ಸಹಾಯಕ | 15 |
| | ಒಟ್ಟು | 54 |

ಒಟ್ಟು 54 ಹುದ್ದೆಗಳ ಪೈಕಿ 01 ಯೋಜನಾಧಿಕಾರಿ ಹುದ್ದೆಯನ್ನು ಪರಿಶಿಷ್ಟ ಜಾತಿಯ ಬ್ಯಾಕ್‌ಲಾಗ್‌ರಡಿಯಲ್ಲಿ ಭರ್ತಿ ಮಾಡತಕ್ಕದ್ದು.

ಈ ಕೆಳಕಂಡ ಗ್ರೂಪ್-ಸಿ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನಿಯಮಗಳನ್ವಯ ಭರ್ತಿ ಮಾಡುವುದು:-

| ಕ್ರ.ಸಂ. | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ |
|---|---|---|
| 1. | ಶೀಘ್ರಲಿಪಿಗಾರ | 11 |
| 2. | ಡಾಟಾ ಎಂಟ್ರಿ ಆಪರೇಟರ್ | 01 |
| | ಒಟ್ಟು | 12 |

ಈ ಆದೇಶವನ್ನು ಟಿಪ್ಪಣಿ ಸಂಖ್ಯೆ: ಆಇ 182 ವೆಚ್ಚ-1/2021, ದಿನಾಂಕ: 17.01.2022ರಲ್ಲಿ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ

ಎನ್. ಕುಮಾರ್ 03/03/2022

(ಎನ್. ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ (ಕೈ.ಅ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

03/3/2022

ಪ್ರತಿ:
1) ಮಹಾಲೇಖಪಾಲರು (ಲೆಕ್ಕಪತ್ರ / ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು.
3) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
4) ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-1 & ಬಂ.ಹೂ), ಆರ್ಥಿಕ ಇಲಾಖೆ, ವಿಧಾನಸೌದ, ಬೆಂಗಳೂರು.
5) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7) ನಿರ್ದೇಶಕರು (ತಾಂತ್ರಿಕ ಕೋಶ) ರವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.